ಮೈಸೂರು ವಿಶ್ವವಿದ್ಯಾನಿಲಯ
ಸ್ಥಾಪನೆ 1916

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 406
ಮೈಸೂರು-570 005

ದಿನಾಂಕ:20 -06-2024

ಸಂಖ್ಯೆ:ಜಿಎಲ್4/358/2012-13

## ಸುತ್ತೋಲೆ

ವಿಷಯ: ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ ಇವರು "ಕನ್ನಡ ಕೃಷಿ ಪುಸ್ತಕ ಪ್ರಶಸ್ತಿ-2023"ಕ್ಕೆ ಅರ್ಜಿಯನ್ನು ಆಹ್ವಾನಿಸಿರುವ ಬಗ್ಗೆ.

ಉಲ್ಲೇಖ: ಡಾ.ಜಿ.ವೀರಭದ್ರ ಗೌಡ, ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರು, ಕನ್ನಡ ಅಧ್ಯಯನ ವಿಭಾಗ, ಕೃಷಿ ವಿಶ್ವವಿದ್ಯಾನಿಲಯ, ಜಿಕೆವಿಕೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಕಅವಿ/ಕ.ಕೃ.ಪು.ಸ್ಪರ್ಧೆ/134/2024-25, ದಿನಾಂಕ:10-06-2024.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮುಖ್ಯಸ್ಥರು, ಕನ್ನಡ ಅಧ್ಯಯನ ವಿಭಾಗ, ಕೃಷಿ ವಿಶ್ವವಿದ್ಯಾನಿಲಯ, ಜಿ.ಕೆ.ವಿ.ಕೆ. ಬೆಂಗಳೂರು ಇವರು ಉಲ್ಲೇಖಿತ ಪತ್ರದಲ್ಲಿ 2023 ರ ಜನವರಿಯಿಂದ 2023, ಡಿಸೆಂಬರ್ ತಿಂಗಳ ಅವಧಿಯಲ್ಲಿ ಮೊದಲ ಮುದ್ರಣವಾಗಿ ಕನ್ನಡದಲ್ಲಿ ಪ್ರಕಟವಾಗಿರುವ ಕೃಷಿ ಸಂಬಂಧಿತ ಪುಸ್ತಕಗಳಲ್ಲಿ ಆಯ್ದ ಪುಸ್ತಕಗಳಿಗೆ 2023ರ "ಕನ್ನಡ ಕೃಷಿ ಪುಸ್ತಕ ಪ್ರಶಸ್ತಿ" ಯನ್ನು ನೀಡುವ ಸಲುವಾಗಿ ಲೇಖಕರಿಂದ ಅರ್ಜಿಯನ್ನು ಆಹ್ವಾನಿಸಿರುವುದಾಗಿ ತಿಳಿಸಿರುತ್ತಾರೆ (ಪತ್ರದ ಪ್ರತಿ ಲಗತ್ತಿಸಿದೆ). ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯಕ್ಕೆ ಯಾವುದೇ ಆರ್ಥಿಕ ಹೊಣೆಗಾರಿಕೆ ಇಲ್ಲದಂತೆ ಆಸಕ್ತ ಅಧ್ಯಾಪಕರುಗಳು ತಾವು ಪ್ರಕಟಿಸಿರುವ ಪುಸ್ತಕಗಳಿಗೆ ಸಂಬಂಧಿಸಿದಂತೆ ನೇರವಾಗಿ ಅರ್ಜಿಯನ್ನು ಸಲ್ಲಿಸುವ ಸಂಬಂಧದ ವಿಷಯವನ್ನು ವಿಭಾಗದ ಅಧ್ಯಾಪಕರುಗಳು, ಸಂಶೋಧನಾ ಅಭ್ಯರ್ಥಿಗಳು ಮತ್ತು ವಿದ್ಯಾರ್ಥಿಗಳ ಗಮನಕ್ಕೆ ತರಬೇಕೆಂದು ಹಾಗೂ ಹೆಚ್ಚಿನ ಮಾಹಿತಿಗಾಗಿ kannada.uas@gmail.com ಇ-ಮೇಲ್ ವಿಳಾಸವನ್ನು ಸಂಪರ್ಕಿಸುವಂತೆ ತಿಳಿಸಲಾಗಿದೆ.

ಕುಲಸಚಿವ

ಇವರಿಗೆ:

1. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಅಧ್ಯಯನ ವಿಭಾಗ/ಕೇಂದ್ರಗಳು, ಮಾನಸಗಂಗೋತ್ರಿ, ಮೈಸೂರು.
2. ಪ್ರಾಂಶುಪಾಲರು, ಮಹಾರಾಜ/ಯುವರಾಜ/ವಿಶ್ವವಿದ್ಯಾನಿಲಯ ಸಂಜೆ ಕಾಲೇಜು/ಲಲಿತ ಕಲಾ ಕಾಲೇಜು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಸಂಯೋಜಕರು, ಐಸಿಡಿ, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು – ಸದರಿ ಮಾಹಿತಿಯನ್ನು ಲಗತ್ತಿಸಿರುವ ಅಡಕಗಳೊಂದಿಗೆ ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಹಾಗೂ ಸುಶಾಸನದ (Good Governence) ಕ್ರಮ ಸಂಖ್ಯೆ 26ರಲ್ಲಿ ಅಪ್‌ಲೋಡ್ ಮಾಡಲು ಸೂಕ್ತ ಕ್ರಮಕೈಗೊಳ್ಳಲು ಕೋರಲಾಗಿದೆ.
4. ಕಛೇರಿ ಪ್ರತಿ.

Scanned with OKEN Scanner

ಕುಲಸಚಿವರ ಕಚೇರಿ
ಕೃ. ವಿ. ವಿ ಬೆಂಗಳೂರು
ಇಂದ ಸಂ. RP-41
ತಾ. 18/6/24

(192)

# ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು

ಕನ್ನಡ ಅಧ್ಯಯನ ವಿಭಾಗ
ಜಿಕೆವಿಕೆ, ಬೆಂಗಳೂರು-65.
ದೂರವಾಣಿ: 080-23330239

ಸಂ.ಕಅವಿ/ಕ.ಕೃಪು.ಸ್ಪರ್ಧೆ/ 1-54 /2024-25

ದಿನಾಂಕ: 10-6-2024

## ಸುತ್ತೋಲೆ

GL-4
18/6/2024

ವಿಷಯ: ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ ಕನ್ನಡ ಕೃಷಿ ಪುಸ್ತಕ ಪ್ರಶಸ್ತಿ-2023.

---

2023ನೆಯ ಸಾಲಿನಲ್ಲಿ ಮೊದಲ ಮುದ್ರಣವಾಗಿ ಕನ್ನಡದಲ್ಲಿ ಪ್ರಕಟವಾಗಿರುವ ಕೃಷಿ ಸಂಬಂಧಿತ ಪುಸ್ತಕಗಳಿಗೆ 2023ರ 'ಕನ್ನಡ ಕೃಷಿ ಪುಸ್ತಕ ಪ್ರಶಸ್ತಿ'ಯನ್ನು ನೀಡುವ ಸಲುವಾಗಿ ಲೇಖಕರಿಂದ ನಿರ್ದಿಷ್ಟ ಅರ್ಜಿ ನಮೂನೆಯ ವಿವರಗಳೊಂದಿಗೆ ಪುಸ್ತಕಗಳನ್ನು ಆಹ್ವಾನಿಸಿದೆ. ಪ್ರಶಸ್ತಿಯು ರೂ. 10,000/- ನಗದು ಮತ್ತು ಪ್ರಶಸ್ತಿ ಫಲಕವನ್ನು ಒಳಗೊಂಡಿರುತ್ತದೆ. 2023ರ ಜನವರಿಯಿಂದ ಡಿಸೆಂಬರ್‌ವರೆಗಿನ ಅವಧಿಯಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾಗಿರುವ ಪುಸ್ತಕಗಳ ತಲಾ ಮೂರು ಪ್ರತಿಗಳನ್ನು ಮುಂದೆ ಸೂಚಿಸಿದ ನಿಯಮ ಮತ್ತು ನಿಬಂಧನೆಗಳಿಗೊಳಪಟ್ಟು ಮುಖ್ಯಸ್ಥರು, ಕನ್ನಡ ಅಧ್ಯಯನ ವಿಭಾಗ, ಕೃಷಿ ವಿಶ್ವವಿದ್ಯಾನಿಲಯ, ಗಾ.ಕೃ.ವಿ.ಕೇ., ಬೆಂಗಳೂರು-560065 ಇವರಿಗೆ, 2024ರ ಜುಲೈ, 15ರೊಳಗೆ ತಲುಪುವಂತೆ ಕಳುಹಿಸಬೇಕು. ಈ ಸುತ್ತೋಲೆ ಮತ್ತು ಅರ್ಜಿ ನಮೂನೆಯನ್ನು http://uasbangalore.edu.in ವೆಬ್‌ತಾಣದಿಂದಲೂ ಪಡೆಯಬಹುದು. ಹೆಚ್ಚಿನ ವಿವರಗಳಿಗೆ kannada. uas@gmail.com ಇ-ಮೇಲ್ ವಿಳಾಸಕ್ಕೆ ಸಂಪರ್ಕಿಸುವುದು. ಈ ಮಾಹಿತಿಯನ್ನು ತಮ್ಮ ಅಧೀನದಲ್ಲಿ ಬರುವ ಕಾಲೇಜು, ಅಧ್ಯಾಪಕರು, ವಿಜ್ಞಾನಿಗಳು ಹಾಗೂ ಲೇಖಕರ ಗಮನಕ್ಕೆ ತರಲು ಕೋರಿದೆ.

ನಿಯಮ ಮತ್ತು ನಿಬಂಧನೆಗಳು

1. ಪುಸ್ತಕವು ಕನ್ನಡದಲ್ಲಿ ರಚಿತವಾಗಿರಬೇಕು, ಕೃಷಿ ಸಂಬಂಧಿತ ವಿಷಯಗಳಿಗೆ ಸಂಬಂಧಿಸಿರಬೇಕು ಹಾಗೂ ವಿಷಯವು ಸಮಗ್ರವಾಗಿರಬೇಕು.
2. ಪುಸ್ತಕವು ಸ್ವಂತ ರಚನೆಯಾಗಿರಬೇಕು.
3. ಪುಸ್ತಕ ಅನುವಾದಿತ ಕೃತಿಯಾಗಿರಬಾರದು ಹಾಗೂ ಇತರ ಲೇಖಕರ ಬರಹಗಳ ಸಂಪಾದಿತ ಕೃತಿಯಾಗಿರಬಾರದು.
4. ಪುಸ್ತಕವು ಮೊದಲ ಪ್ರಕಟಣೆ/ಆವೃತ್ತಿಯಾಗಿರಬೇಕು ಹಾಗೂ ಮರುಮುದ್ರಿತ/ಪರಿಷ್ಕರಿಸಿ ಮರುಮುದ್ರಿಸಿದ ಕೃತಿಯಾಗಿರಬಾರದು.
5. ಪುಸ್ತಕವು ಯಾವುದೇ ಕೃಷಿ ಸಂಬಂಧಿತ ಕೈಪಿಡಿಯಾಗಿರಬಾರದು.
6. ಪುಸ್ತಕವು ಕನಿಷ್ಠ 1/8 ಕ್ರೌನ್ ಅಳತೆಯ ಮತ್ತು ತಾಂತ್ರಿಕ ಪುಟಗಳನ್ನು ಹೊರತುಪಡಿಸಿ ಕನಿಷ್ಠ 50 ಪುಟಗಳಷ್ಟಾದರೂ ಇರಬೇಕು.
7. ಪುಸ್ತಕವು ನಿರ್ದಿಷ್ಟಪಡಿಸಿದ ವರ್ಷದಲ್ಲೇ ಪ್ರಕಟವಾಗಿರಬೇಕು (2023ನೆಯ ಜನವರಿ 1ರಿಂದ ಡಿಸೆಂಬರ್ 31ರೊಳಗೆ ಪ್ರಕಟವಾಗಿರಬೇಕು).
8. ಈ ಪ್ರಶಸ್ತಿ ಲೇಖಕರಿಗೆ ಮಾತ್ರ ನೀಡುವುದು. ಪ್ರಕಾಶಕರಿಗೆ/ಮುದ್ರಕರಿಗೆ ನೀಡಲಾಗುವುದಿಲ್ಲ.
9. ಲೇಖಕರು ಮೃತರಾಗಿದ್ದಲ್ಲಿ ಅವರ ಕಾನೂನಿನನ್ವಯ ವಾರಸುದಾರರು ಪುಸ್ತಕವನ್ನು ಪ್ರಶಸ್ತಿಗೆ ಸಲ್ಲಿಸಬಹುದು ಹಾಗೂ ಅದರೊಂದಿಗೆ ಮೃತರ ಮರಣ ಪ್ರಮಾಣ ಪತ್ರವನ್ನು ಲಗತ್ತಿಸಿರಬೇಕು. ಆ ಪುಸ್ತಕ ಪ್ರಶಸ್ತಿ ಪಡೆದಲ್ಲಿ ಪ್ರಶಸ್ತಿ ಫಲಕವನ್ನು ಲೇಖಕರ ಹೆಸರಿಗೆ ನೀಡಲಾಗುವುದು ಮತ್ತು ಪ್ರಶಸ್ತಿ ಹಣದ ಚೆಕ್‌ಅನ್ನು ವಾರಸುದಾರರಿಗೆ ನೀಡಲಾಗುವುದು.
10. ಒಬ್ಬರಿಗಿಂತ ಹೆಚ್ಚು ಲೇಖಕರಿದ್ದಲ್ಲಿ ಪ್ರಶಸ್ತಿ ಮೊತ್ತವನ್ನು ಸಮಾನವಾಗಿ ಹಂಚಲಾಗುವುದು ಹಾಗೂ ಮೊದಲ ಲೇಖಕರನ್ನು ಮಾತ್ರ ಪ್ರಶಸ್ತಿ ಸ್ವೀಕರಿಸಲು ಆಹ್ವಾನಿಸಲಾಗುವುದು.
11. ನಿರ್ದಿಷ್ಟ ವರ್ಷದಲ್ಲಿ ಒಬ್ಬ ಲೇಖಕರಿಂದ ಒಂದಕ್ಕಿಂತ ಹೆಚ್ಚು ಪುಸ್ತಕಗಳು ಪ್ರಕಟಿಸಿದ್ದಲ್ಲಿ ಅಂತಹ ಲೇಖಕರು ಗರಿಷ್ಠ ಮೂರು ವಿವಿಧ ಪುಸ್ತಕಗಳನ್ನು ಪ್ರಶಸ್ತಿಗೆ ಸಲ್ಲಿಸಬಹುದು.
12. ಲೇಖಕರು ಸಲ್ಲಿಸುವ ಪುಸ್ತಕಕ್ಕೆ ಯಾವುದಾದರೂ ಪ್ರಶಸ್ತಿ/ಬಹುಮಾನಗಳು ಸಂದಿದ್ದಲ್ಲಿ ಅಂತಹ ಪುಸ್ತಕಗಳನ್ನು ಸಲ್ಲಿಸಬಾರದು.
13. ಈಗಾಗಲೇ ಒಂದು ಸಾರಿ 'ಕನ್ನಡ ಕೃಷಿ ಪುಸ್ತಕ ಪ್ರಶಸ್ತಿ' ಪಡೆದ ಕೃತಿಯ ಲೇಖಕರು ಮತ್ತೊಮ್ಮೆ ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸುವಂತಿಲ್ಲ.
14. ಸ್ಪರ್ಧೆಗೆ ಸಲ್ಲಿಸುವ ಲೇಖಕರು 3 ಪ್ರತಿಗಳನ್ನು ತಮ್ಮದೇ ವೆಚ್ಚದಲ್ಲಿ ಅಂಚೆ/ಕೊರಿಯರ್ ಮೂಲಕ ಅಥವಾ ಖುದ್ದಾಗಿ ಸಲ್ಲಿಸಬೇಕು.

DR (Hor)

-2

180
18.6.24

Scanned with OKEN Scanner

15. ಪ್ರಶಸ್ತಿ ವಿಜೇತರಿಗೆ ಮಾತ್ರ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಲು 2ನೇ ದರ್ಜೆ ರೈಲು ಅಥವಾ ಬಸ್ಸು ಪ್ರಯಾಣದ ವೆಚ್ಚವನ್ನು ಹಾಗೂ ಸ್ಥಳೀಯ ಪ್ರಯಾಣ ವೆಚ್ಚವನ್ನು ಭರಿಸಲಾಗುವುದು.
16. ಪ್ರಶಸ್ತಿಗೆ ಆಯ್ಕೆಯಾದ ಕೃತಿಯ ಪ್ರತಿಗಳನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕೃಷಿ ತಂತ್ರಜ್ಞಾನ ಮಾಹಿತಿ ಕೇಂದ್ರದ ವತಿಯಿಂದ ಮಾರಾಟ ಮಾಡಲು ಅನುವು ಮಾಡಿಕೊಡಬೇಕು. ಅದಕ್ಕಾಗಿ ಕನಿಷ್ಠ 50 ಪ್ರತಿಗಳನ್ನಾದರೂ ಲೇಖಕರು ಕೇಂದ್ರಕ್ಕೆ ಸರಬರಾಜು ಮಾಡಬೇಕಾಗುತ್ತದೆ.
17. ಪ್ರಶಸ್ತಿಯ ತೀರ್ಮಾನ ಕುರಿತಂತೆ ಯಾವುದೇ ಪತ್ರವ್ಯವಹಾರಕ್ಕೆ ಅವಕಾಶವಿರುವುದಿಲ್ಲ. ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ತೀರ್ಮಾನವೇ ಅಂತಿಮವಾದದ್ದು.

(ಡಾ. ಜಿ.ವೀರಭದ್ರ ಗೌಡ)
ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರು(ಪ್ರ)
**ಮುಖ್ಯಸ್ಥರು**
**ಕನ್ನಡ ಅಧ್ಯಯನ ವಿಭಾಗ**

## ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ 'ಕೃಷಿ ಪುಸ್ತಕ ಪ್ರಶಸ್ತಿ–2023ರ ಅರ್ಜಿ ನಮೂನೆ

1. ಲೇಖಕರ ಹೆಸರು: ____________________

2. ವಿಳಾಸ: ____________________

____________________

____________________ ಪಿನ್ ಕೋಡ್: __________

3. ದೂರವಾಣಿ ಸಂಖ್ಯೆ: ______________ ಮೊಬೈಲ್: ______________

4. ಪುಸ್ತಕದ ಶೀರ್ಷಿಕೆ: ____________________

____________________

5. ಪ್ರಕಟವಾದ ವರ್ಷ: ____________________

6. ಪ್ರಕಾಶಕರು ಮತ್ತು ಅವರ ವಿಳಾಸ: ____________________

____________________

7. ಪುಟಗಳ ಸಂಖ್ಯೆ: __________

ಲೇಖಕರ ಸಹಿ

### ಘೋಷಣೆ

____________________ ಶೀರ್ಷಿಕೆಯ ಈ ಪುಸ್ತಕವು ನನ್ನ ಸ್ವಂತ ರಚನೆಯಾಗಿದ್ದು, ಇದಕ್ಕೆ ಯಾವುದೇ ಪ್ರಶಸ್ತಿ/ಬಹುಮಾನ ಸಂದಿರುವುದಿಲ್ಲ. ನಾನು, ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ 'ಕನ್ನಡ ಕೃಷಿ ಪುಸ್ತಕ ಪ್ರಶಸ್ತಿ–2023ರ' ನಿಯಮ, ನಿಬಂಧನೆಗಳಿಗೆ ಬದ್ಧನಾಗಿರುತ್ತೇನೆ. ಈ ಮೇಲೆ ನಾನು ನೀಡಿರುವ ವಿವರಗಳು ಸತ್ಯವಾದವುಗಳೆಂದು ಪ್ರಮಾಣೀಕರಿಸುತ್ತೇನೆ.

ಸ್ಥಳ:

ದಿನಾಂಕ: ಲೇಖಕರ ಸಹಿ

Scanned with OKEN Scanner